ಲಮಂಗಲ ತಾಲ್ಲೂಕು ಮಣ್ಣೆ-ಬರಗೂರು ರಸ್ತೆ ದುರಸ್ತಿ.

307 - ಶ್ರೀ ಸಿ. ವೀರಭದ್ರಯ್ಯ (ಕೊರಟಗೆರೆ): ಮಾನ್ಯ ಲೋಕೋಪಯೋಗಿ ಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ.

ಅ) *ನೆಲಮಂಗಲ ತಾಲ್ಲೂಕು ತ್ಯಾಮಗೊಂಡ್ಲು ಹೋಬಳಿ ಮಣ್ಣೆ-ಬರಗೂರು ರಸ್ತೆಯು ಬಸ್ಸು ಸಂಚಾರಕ್ಕೆ ಮತ್ತು ಸಾರ್ವಜನಿಕರು ಓಡಾಡಲು ಕಳೆದ 5-6 ವರ್ಷಗಳಿಂದ ಯೋಗ್ಯಕರವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಸದರಿ ರಸ್ತೆಯನ್ನು ದುರಸ್ತಿ ಪಡಿಸಲು ಸರ್ಕಾರ ತೆಗೆದು ಕೊಂಡು ಕ್ರಮಗಳೇನು;*

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):

ಅ) ಸದರಿ ರಸ್ತೆಯನ್ನು ಕಳೆದ ಸಾಲಿನಲ್ಲಿ ಮುಖ್ಯ ಜಿಲ್ಲಾ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಿಂದ ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ತೆಗೆದುಕೊಂಡಿದ್ದು ನಾದರಸ್ತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) 1993-94ರ ಸಾಲಿನಲ್ಲಿ ಈ ರಸ್ತೆಯ 8.0 ಕಿಮೀ. ಉದ್ದದಲ್ಲಿ 3.0 ಕಿಮೀ. ಉದ್ದಕ್ಕೆ ಮರು ಜಲ್ಲಿ ಹಾಕುವ ಕಾರ್ಯಕ್ರಮವಿದೆ. ಅನುದಾನದ ಲಭ್ಯತೆಯನ್ನು ಅನುಸರಿಸಿ ಈ ರಸ್ತೆಯನ್ನು ಸುಸ್ಥಿತಿಯಲ್ಲಿಡಲು ವಾರ್ಷಿಕ ನಿರ್ವಹಣಾ ಅನುದಾನದಲ್ಲಿ ಕ್ರಮ ಕೈಗೊಳ್ಳಲಾಗಿದೆ ಹಾಗೂ ಹಂತ ಹಂತವಾಗಿ ಈ ರಸ್ತೆಯನ್ನು ಅಭಿವೃದ್ಧಿ ಪಡಿಸಲಾಗುವುದು.

ಮಲೆನಾಡು ಅಭಿವೃದ್ಧಿ ಮಂಡಳಿಯ ಕಾಮಗಾರಿಗಳ ಕುರಿತು

327 - ಶ್ರೀ ಪಿ.ಬಸವರಾಜ್ (ಬ್ರಹ್ಮಾವರ): ಮಾನ್ಯ ಪರಿಸರ ಮತ್ತು ಜೀವ ಪರಿಸರ ಶಾಸ್ತ್ರ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1993-94ನೇ ಸಾಲಿಗೆ ಮಲೆನಾಡು ಅಭಿವೃದ್ಧಿ ಮಂಡಳಿಯಿಂದ ಬ್ರಹ್ಮಾವರ ವಿಧಾನ ಸಭಾಕ್ಷೇತ್ರದ ವ್ಯಾಪ್ತಿಯ ಯಾವ ಯಾವ ಕಾಮಗಾರಿಗಳಿಗೆ ಈಗಾಗಲೇ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ?*

ಆ) *ದಕ್ಷಿಣ ಕನ್ನಡ ಜಿಲ್ಲೆಯ ಬೇರೆ ವಿಧಾನ ಸಭಾಕ್ಷೇತ್ರದ ವ್ಯಾಪ್ತಿಯಲ್ಲಿ ಮಲೆನಾಡು ಅಭಿವೃದ್ಧಿ ಮಂಡಳಿ ಕಾಮಗಾರಿಗಳು ಈಗಾಗಲೇ ಪ್ರಾರಂಭವಾಗಿದ್ದು ಬ್ರಹ್ಮಾವರ ವಿಧಾನ ಸಭಾ ಕ್ಷೇತ್ರದಲ್ಲಿ ಯಾವುದೇ ಕಾಮಗಾರಿಗಳು ಆರಂಭವಾಗಿಲ್ಲದಿರುವುದಕ್ಕೆ ಕಾರಣಗಳೇನು?*

ಇ) *ಇನ್ನು 3 ತಿಂಗಳ ನಂತರ ಮಳೆಗಾಲ ಆರಂಭವಾಗುವುದರಿಂದ ಮಲೆನಾಡು ಅಭಿವೃದ್ಧಿ ಮಂಡಳಿಯ ಸದರಿ ಸಾಲಿನ ಕಾಮಗಾರಿಗಳನ್ನು ಕೂಡಲೇ ಪ್ರಾರಂಭಿಸಲಾಗುವುದೇ?*

ಶ್ರೀ ಎನ್.ಜಿ. ಹಾಲಪ್ಪ (ಪರಿಸರ ಮತ್ತು ಜೀವ ಪರಿಸರ ಶಾಸ್ತ್ರ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ರಾಜ್ಯ ಸಚಿವರು):

ಅ) ವಿವರಗಳನ್ನು ಅನುಬಂಧದಲ್ಲಿ ಕೊಡಲಾಗಿದೆ.

ಆ) ಮಂಡಳಿಯು ಬ್ರಹ್ಮಾವರ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರಾತಿ ನೀಡಿದ 11 ಕಾಮಗಾರಿಗಳಲ್ಲಿ 9 ಕಾಮಗಾರಿಗಳಿಗೆ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯತ್ ಉಡುಪಿ ಇವರು ಟೆಂಡರ್ ಕರೆದು ಗುತ್ತಿಗೆದಾರರನ್ನು ನಿಗದಿಪಡಿಸಿರುತ್ತಾರೆ. ಇವುಗಳಲ್ಲಿ 6 ಕಾಮಗಾರಿಗಳು ಪ್ರಾರಂಭವಾಗಿದ್ದು, ಉಳಿದ 3 ಕಾಮಗಾರಿಗಳನ್ನು ಸಧ್ಯದಲ್ಲೇ